# ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ,

## ಟಿ. ನರಸೀಪುರ.

## ಸಿ. ಸಿ ನಂ. 500/2025

ಪಿರ್ಯಾದಿದಾರರು : ಸರ್ಕಾರ ಪರವಾಗಿ ಬನ್ನೂರು ಪೊಲೀಸ್ ಠಾಣೆ

ವಿರುದ್ಧ

ಆರೋಪಿ : ಕೃಷ್ಣ ಎಸ್ ಬಿನ್ ಸಣ್ಣೇಗೌಡ, 60 ವರ್ಷ,
ವಾಸಃ 2 ನೇ ಕ್ರಾಸ್, ವೆಂಕಟೇಶ್ವರ ಲೇಔಟ್,
ಆಲನಹಳ್ಳಿ ಬಡಾವಣೆ, ದೇವೇಗೌಡ ಸರ್ಕಲ್ ಹತ್ತಿರ,
ಮೈಸೂರು ಸಿಟಿ.

## ದೋಷಾರೋಪಣೆ

**ಶ್ರೀ ಸಚಿನ್ ಹೆಚ್.ಆರ್, ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ, ಟಿ.ನರಸೀಪುರ, ಆದ ನಾನು ಮೇಲ್ಕಂಡ ಆರೋಪಿಯಾದ ನಿಮ್ಮ ಮೇಲೆ ಕೆಳಕಂಡಂತೆ ದೋಷಾರೋಪಣೆಯನ್ನು ಮಾಡುತ್ತೇನೆ.**

ನಿಮ್ಮ ಮೇಲೆ ಹೊರಿಸಲಾದ ದೋಷಾರೋಪಣೆ ಏನೆಂದರೆ

ದಿನಾಂಕ 21.10.2023 ರಂದು ಸಮಯ ಸಂಜೆ 4.00 ಗಂಟೆಗೆ ಬನ್ನೂರು ಪೋಲೀಸ್ ಠಾಣಾ ವ್ಯಾಪ್ತಿಯ ಮಾನಕಹಳ್ಳಿ ಗ್ರಾಮದ ಎಸ್.ಆರ್.ಪಿ ರಸ್ತೆಯಲ್ಲಿರುವ ಚಾಸಾ-1 ಶಂಕರೇಗೌಡರವರ ಖಾಲಿ ನಿವೇಶನದಲ್ಲಿ ಹಾಕಿದ್ದ ಹದ್ದು ಬಸ್ತು ಕಲ್ಲನ್ನು ಆರೋಪಿಯಾದ ನೀವು ಕಿತ್ತು ಹಾಕುತ್ತೇನೆ ಎಂದು ಕಲ್ಲನ್ನು ಕೀಳಲು ಹೋದಾಗ ಚಾಸಾ-1 ರವರು ಏಕೆ ಕಲ್ಲನ್ನು ಕೀಳುತ್ತಿದ್ದಿಯಾ ಎಂದು ಪ್ರಶ್ನಿಸಿದಾಗ ಏಕಾಏಕಿ ಅವರಿಗೆ ಅವಮಾನ ಮಾಡುವ ಉದ್ದೇಶದಿಂದ ನಿಮ್ಮ ಬಲಕಾಲಿನ ಚಪ್ಪಲಿಯನ್ನು ತೆಗೆದುಕೊಂಡು ಅವರ ಬಲಭುಜಕ್ಕೆ ಮತ್ತು ಎದೆಗೆ ಹಲ್ಲೆ ಮಾಡಿ ಸಾಮಾನ್ಯ ಸ್ವರೂಪದ ಗಾಯವನ್ನುಂಟು ಮಾಡಿದ್ದು, ಆ ಮೂಲಕ ಆರೋಪಿಯಾದ ನೀವು ಭಾರತೀಯ ದಂಡ ಸಂಹಿತೆ ಕಲಂ.355 ರನ್ವಯ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ.

ಎರಡನೇಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಹಾಗೂ ಸ್ಥಳದಲ್ಲಿ ಆರೋಪಿಯಾದ ನೀವು ಚಾಸಾ-1 ರವರಿಗೆ ಬೋಳಿ ಮಗನೆ, ಸೂಳೆ ಮಗನೆ ಎಂದು ಅವಾಚ್ಯ

ಶಬ್ದಗಳಿಂದ ನಿಂದಿಸಿದ್ದು, ಆ ಮೂಲಕ ಆರೋಪಿಯಾದ ನೀವು ಭಾರತೀಯ ದಂಡ ಸಂಹಿತೆ ಕಲಂ.504 ರನ್ವಯ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ.

ಕೊನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಹಾಗೂ ಸ್ಥಳದಲ್ಲಿ ಆರೋಪಿಯಾದ ನೀವು ಚಾಸಾ-1 ರವರನ್ನು ಜಾಗದ ವಿಚಾರಕ್ಕೆ ಬಂದರೆ ನಿನ್ನನ್ನು ಕೊಲೆ ಮಾಡದೆ ಬಿಡುವುದಿಲ್ಲ ಎಂದು ಕೊಲೆ ಬೆದರಿಕೆ ಹಾಕಿದ್ದು, ಆ ಮೂಲಕ ಆರೋಪಿಯಾದ ನೀವು ಭಾರತೀಯ ದಂಡ ಸಂಹಿತೆ ಕಲಂ.506 ರನ್ವಯ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ.

ಮೇಲೆ ಹೇಳಿದ ಅಪರಾಧಗಳಿಗಾಗಿ ನೀವು ಈ ನ್ಯಾಯಾಲಯದಲ್ಲಿ ವಿಚಾರಣೆಗೆ ಒಳಪಡತಕ್ಕದ್ದು.

ದಿನಾಂಕಃ **14.05.2026.**

**(ಸಚಿನ್ ಹೆಚ್.ಆರ್)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ.**
**ಟಿ. ನರಸೀಪುರ.**

## ಆರೋಪಿತರ ಹೇಳಿಕೆ

ಪ್ರಶ್ನೆ– 1 ಈಗ ಓದಿ ಹೇಳಿದ ಆರೋಪಣೆಯನ್ನು ಅರ್ಥ ಮಾಡಿಕೊಂಡಿರಾ ?

ಉತ್ತರಃ

ಪ್ರಶ್ನೆ–2 ಮೇಲೆ ಹೇಳಿದ ಆರೋಪಣೆಯನ್ನು ಒಪ್ಪಿಕ್ಕೊಳ್ಳುವಿರಾ ? ಅಥವಾ ವಿಚಾರಣೆ ಆಗಬೇಕೆನ್ನುವಿರಾ?
ಉತ್ತರಃ

**(ಮೇಲ್ಕಂಡ ಆರೋಪಣೆಯನ್ನು ಆರೋಪಿತರಿಗೆ ತಿಳಿದ ಭಾಷೆಯಲ್ಲಿ ತೆರೆದ ನ್ಯಾಯಾಲಯದಲ್ಲಿ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ಬರೆದು ಕೊಂಡಿದ್ದು ಅವು ಸರಿಯಾಗಿರುತ್ತದೆ ಎಂದು ಈ ಮೂಲಕ ದೃಢೀಕರಿಸುತ್ತೇನೆ.)**

**(ಸಚಿನ್ ಹೆಚ್.ಆರ್)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ. ಎಫ್.ಸಿ., ಟಿ.ನರಸೀಪುರ.**

**ಆರೋಪಿ ಸಹಿ**